ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1969(2241)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ವಿಷಯ : ಚಾಮರಾಜನಗರದಲ್ಲಿ ನೂತನ ಹೈಟೆಕ್ ಬಸ್ ನಿಲ್ದಾಣ ಸ್ಥಾಪನೆ ಬಗ್ಗೆ

(ಅ) ಚಾಮರಾಜನಗರವು ಅಭಿವೃದ್ಧಿ ಹೊಂದುತ್ತಿರುವ ಜಿಲ್ಲಾ ಕೇಂದ್ರವಾಗಿದ್ದು, ಕರ್ನಾಟಕ ಹಾಗೂ ತಮಿಳುನಾಡು ಸಾರಿಗೆ ಸಂಸ್ಥೆಗಳ ಹೆಚ್ಚಿನ ಬಸ್ ಸಂಚಾರ ಇರುವುದರಿಂದ, ಮುಂದಿನ ಬೆಳವಣಿಗೆಯನ್ನು ದೃಷ್ಟಿಯಲ್ಲಿಟ್ಟುಕೊಂಡು, ಒಂದು ಹೈಟೆಕ್ ಬಸ್ ನಿಲ್ದಾಣ ಸ್ಥಾಪಿಸುವ ವಿಷಯ ಸರ್ಕಾರದ ಪರೀಶೀಲನೆಯಲ್ಲಿದೆಯೇ; ಈ ಬಗ್ಗೆ ಸರ್ಕಾರ ಗಮನಹರಿಸುವುದೇ;

(ಆ) ಹಾಲಿ ಇರತಕ್ಕ ಬಸ್ ನಿಲ್ದಾಣ ಬಹಳ ಕಿರಿದಾಗಿದ್ದು, ಸಂತೇಮರಹಳ್ಳಿ ರಸ್ತೆಯಲ್ಲಿರುವ ರೇಷ್ಮೆ ಇಲಾಖೆಯ ಕಟ್ಟಡ ಮತ್ತು ಜಾಗವನ್ನು ವಶಕ್ಕೆ ತೆಗೆದುಕೊಂಡು ಈ ಸ್ಥಳದಲ್ಲಿ ಒಂದು ಹೈಟ್ಕ್ ಬಸ್ ನಿಲ್ದಾಣ ಸ್ಥಾಪಿಸಲು ಕ್ರಮ ವಹಿಸಲಾಗುವುದೇ?